# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority


ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್/04/2025 ದಿನಾಂಕ: 07.03.2025

## ಪ್ರಕಟಣೆ

2024–25 ನೇ ಸಾಲಿನ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಬರುವ ವಸತಿ ಶಾಲೆಗಳಿಗೆ ಪ್ರವೇಶ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ 15.02.2025 ರಂದು ನಡೆಸಿ, ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ 24/02/2025 ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಅದರಂತೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಮೂಲಕ ಪರಿಶೀಲಿಸಿ ದಿನಾಂಕ 25.02.2025 ರಂದು ಪರಿಷ್ಕೃತ ಕೀ ಉತ್ತರಗಳನ್ನು ಪ್ರಕಟಿಸಲಾಗಿತ್ತು. ಸದರಿ ಪರೀಕ್ಷೆಯ ಅಂತಿಮ ಕೀ ಉತ್ತರಗಳನ್ನು ಹಾಗೂ ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಅಂಕಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಪ್ರಕಟಿತ ತಾತ್ಕಾಲಿಕ ಅಂಕಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 13.03.2025ರ ಮಧ್ಯಾಹ್ನ 12.00 ರೊಳಗೆ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಲಿಂಕ್ ಮೂಲಕ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಿದೆ. ಪೂರಕ ದಾಖಲೆಗಳಿಲ್ಲದ ಆಕ್ಷೇಪಣೆಗಳನ್ನು ಹಾಗೂ ಕೀ ಉತ್ತರಗಳ ಸಂಬಂಧ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು


18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012

18th Cross, Sampige Road, Malleshwaram, Bengaluru - 560 012.

Phone: 080 - 23 564 583 Helpline : 080 - 23 460 460.

e-mail : keauthority-ka@nic.in Website : http://kea.kar.nic.in